

ಅರುಣ ಪಿ. ಭಟ್ಟ


## ವಾರ ಭವಿಷ್ಯ: 18.05.2023ರಿಂದ 24.05.2023ರವರೆಗೆ




ವೃತ್ತಿನಿರತರಿಗೆ ಉತ್ತಮವಾದ ದಿನಗಳಿವು. ಉದ್ಯೋಗ ಸ್ಥಳದಲ್ಲಿ ನಿಮ್ಮ ಪಾಲಿನ ಜವಾಬ್ದಾರಿ ಜಾಸ್ತಿ ಆಗಲಿದೆ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆಗಳಿವೆ. ಸೇವಾ ವಲಯ ಹಾಗೂ ಉದ್ಯಮ, ವ್ಯಾಪಾರ ಮಾಡುವವರಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳಿ. ವಿರೋಧಿಗಳು ನಿಮಗೆ ಸಮಸ್ಯೆ ಮಾಡಲು ಪ್ರಯತ್ನಿಸಬಹುದು. ಶುಭದಿನ **20.** ಕನಕಧಾರಾ ಸ್ತೋತ್ರ ಪಠಿಸಿರಿ.




ಪ್ರೀತಿಪಾತ್ರರೊಂದಿಗೆ ಉತ್ತಮ ಸಮಯ ಕಳೆಯಲಿದ್ದೀರಿ. ಧಾರ್ಮಿಕ, ಸಾಮಾಜಿಕ ಕಾರ್ಯಗಳಲ್ಲಿ ಹೆಚ್ಚು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಹೆಸರಾಂತ ಸಂಸ್ಥೆಯೊಂದರಲ್ಲಿ ಉದ್ಯೋಗ ದೊರೆಯುವ ಅವಕಾಶ ಇದೆ. ಪದೋನ್ನತಿ ಸಿಗುವ ಯೋಗ ಇದೆ. ನಿಮ್ಮ ಸಾಧನೆಗೆ ಪೋಷಕರು ಸಂತೋಷ ಪಡುತ್ತಾರೆ. ನಿಮ್ಮ ಆದಾಯದಲ್ಲಿ ಹೆಚ್ಚಳ ಆಗಲಿದೆ. ಶುಭದಿನ **23.** ಹನುಮಾನ್ ಚಾಲೀಸ್ ಪಠಿಸಿರಿ.





ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಆರೋಗ್ಯ ಸಮಸ್ಯೆ ಎದುರಾಗಬಹುದು. ಕುಟುಂಬದಲ್ಲಿ ಭಿನ್ನಾಭಿಪ್ರಾಯ ತಲೆದೋರುವ ಸಾಧ್ಯತೆ ಇದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಸಾಧ್ಯತೆ ಇದೆ. ಧಾರ್ಮಿಕ ಆಚರಣೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಬಹಳ ಜವಾಬ್ದಾರಿಯುತ ಕೆಲಸವೊಂದಕ್ಕೆ ನಿಮ್ಮನ್ನು ನೇಮಿಸುವ ಸಾಧ್ಯತೆಗಳಿವೆ. ಶುಭದಿನ **22.** ವಿಷ್ಣು ಸಹಸ್ರನಾಮ ಪಠಿಸಿರಿ.





ಸಂಗಾತಿ ಜೊತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿ ಆಗಲಿದೆ. ಅವಿವಾಹಿತರಿಗೆ ಸೂಕ್ತ ಸಂಬಂಧ ದೊರೆಯುವ ಸಾಧ್ಯತೆ ಇದೆ. ವಿರೋಧಿಗಳು ನಿಮಗೆ ಸಮಸ್ಯೆ ಮಾಡುವ ಸಾಧ್ಯತೆ ಇದೆ. ದೂರ ಪ್ರಯಾಣ ಮಾಡುವುದಿದ್ದರೆ ಮುಂದಕ್ಕೆ ಹಾಕುವುದು ಒಳಿತು. ಇಲ್ಲದಿದ್ದಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾದೀತು. ವೃತ್ತಿಪರ ಜೀವನದಲ್ಲೂ ಕೆಲ ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಶುಭದಿನ **19.** ಚಂಡಿ ಪಾರಾಯಣ ಮಾಡಿರಿ.




ಸಂಬಂಧಿಕರಿಂದ ಪ್ರೀತಿ ವಾತ್ಸಲ್ಯ ದೊರೆಯುತ್ತದೆ. ಹಣಕಾಸು ವಿದೇಶ ವ್ಯವಹಾರದಲ್ಲಿ ಏಳ್ಗೆ ಇದೆ. ಇದೇ ವೇಳೆ ಆತಂಕ, ಆರೋಗ್ಯ ಸಮಸ್ಯೆಗಳು ಕಾಡಬಹುದು. ಪಾರ್ಟನರ್ ಷಿಪ್ ವ್ಯವಹಾರಗಳನ್ನು ಮಾಡುತ್ತಿರುವವರಿಗೆ ಲಾಭ ಇದೆ. ಕಾನೂನು ವ್ಯಾಜ್ಯಗಳು ಎದುರಾಗಬಹುದು. ಈ ವಾರದಲ್ಲಿ ನಿಮ್ಮ ವರ್ಚಸ್ಸು ಬದಲಾಗಲಿದೆ. ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಶುಭದಿನ **20.** ಶ್ರೀವೇಂಕಟೇಶ್ವರ ಸ್ತೋತ್ರ ಪಠಿಸಿರಿ.





ಮಕ್ಕಳಿಗೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಆರ್ಥಿಕವಾಗಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಅತ್ಯುತ್ತಮವಾದ ಸಮಯ ಕಳೆಯಲು ಅವಕಾಶ ಇದು. ಹಲವು ಕ್ಷೇತ್ರದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಆದರೆ ಕಾನೂನು ವ್ಯಾಜ್ಯಗಳಲ್ಲಿ ಬಹಳ ಎಚ್ಚರಿಕೆಯಿಂದ ಹೆಜ್ಜೆಗಳನ್ನು ಇಡಬೇಕು. ಶುಭದಿನ **19.** ಕಾಲಭೈರವನ ಸೇವೆ ಮಾಡಿರಿ.





ಕುಟುಂಬದಲ್ಲಿ ಸಂತಸದ ವಾತಾವರಣ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ಅವುಗಳು ನಿವಾರಣೆ ಆಗುತ್ತವೆ. ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ. ವ್ಯಾಪಾರದಲ್ಲಿ ಪ್ರಗತಿ ಇದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸುಮಧುರ ಕ್ಷಣಗಳನ್ನು ಕಳೆಯುವ ಯೋಗ ಇದೆ. ಈ ಹಿಂದಿಗಿಂತ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರುತ್ತದೆ. ವಿವಿಧ ಕ್ಷೇತ್ರಗಳಲ್ಲಿ ನಿರೀಕ್ಷಿತ ಫಲಿತಾಂಶ ಸಿಗಲಿದೆ. ಶುಭದಿನ **23.** ಲಿಂಗಾಷ್ಟಕ ಪಠಿಸಿರಿ.





ಆತ್ಮವಿಶ್ವಾಸ ಹೆಚ್ಚಾಗಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ದಾನ ಧರ್ಮ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲಿದ್ದೀರಿ. ಕೌಟುಂಬಿಕ ಜೀವನದಲ್ಲಿ ಸಂತೋಷ ಇರಲಿದೆ. ಪೋಷಕರ ಜತೆಗೆ ಸಂತೋಷದ ಸಮಯ ಕಳೆಯಲಿದ್ದೀರಿ. ವಾಹನ, ಮನೆ ಖರೀದಿಗೆ ಪ್ರಶಸ್ತವಾದ ಸಮಯ ಇದು. ಶುಭದಿನ **22.** ಶ್ರೀರಾಮರಕ್ಷಾ ಸ್ತೋತ್ರ ಓದಿರಿ.





ವೈಯಕ್ತಿಕ ಜೀವನದಲ್ಲಿ ಸಂಭ್ರಮದ ವಾತಾವರಣ ಇರಲಿದೆ. ಕುಟುಂಬದಲ್ಲಿ ಒಗ್ಗಟ್ಟು ಹೆಚ್ಚಾಗಲಿದೆ. ಆಸ್ತಿ ವಿಚಾರದಲ್ಲಿ ಶುಭ ಸುದ್ದಿ ಕೇಳುವ ಯೋಗ ಇದೆ. ವಿದೇಶಿ ವ್ಯವಹಾರ ಹೂಡಿಕೆಯಲ್ಲಿ ಲಾಭ ಪಡೆಯಲಿದ್ದೀರಿ. ವಿರೋಧಿಗಳು ನಾನಾ ಬಗೆಯಲ್ಲಿ ಹಿಂಸೆ ನೀಡುವ ಸಾಧ್ಯತೆ ಇದೆ. ಆರೋಗ್ಯ ವಿಚಾರದಲ್ಲಿ ಎಚ್ಚರಿಕೆಯಿಂದ ಇರಬೇಕು. ಮನೆ ವಿಚಾರದಲ್ಲಿ ಪ್ರಗತಿ ಇದೆ. ಶುಭದಿನ **19.** ನವದುರ್ಗಾ ಆರಾಧನೆ ಮಾಡಿರಿ.




ಆರೋಗ್ಯದಲ್ಲಿ ಸಮಸ್ಯೆಗಳಿದ್ದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಸ್ಥಿರಾಸ್ತಿಯಲ್ಲಿ ಲಾಭ ಗಳಿಸುವ ಯೋಗ ಇದೆ. ವಿದೇಶಿ ವ್ಯವಹಾರ ಹಾಗೂ ಹೂಡಿಕೆಯಲ್ಲಿ ಸ್ಥಿರವಾದ ಪ್ರಗತಿ ಇದೆ. ವಿರೋಧಿಗಳು ನಿಮ್ಮನ್ನು ಕಾನೂನು ಸಮಸ್ಯೆಗಳಲ್ಲಿ ಸಿಲುಕಿಸಬಹುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಹೆಚ್ಚು ಪಾಲ್ಗೊಳ್ಳಲಿದ್ದೀರಿ. ನಿರೀಕ್ಷೆಗಿಂತ ಉತ್ತಮವಾದ ಫಲಿತಾಂಶ ದೊರೆಯಲಿದೆ. ಶುಭದಿನ **20.** ಶಿವಕವಚ ಪಠಣ ಮಾಡಿರಿ.




ಹಣಕಾಸು ಹೂಡಿಕೆಗೆ ಹಲವು ಅವಕಾಶಗಳು ದೊರೆಯಲಿವೆ. ಸಾಲ ಮರುಪಾವತಿಗೆ ಪ್ರಾಮಾಣಿಕ ಪ್ರಯತ್ನ ಪಡುತ್ತೀರಿ. ಆರೋಗ್ಯ ಸಮಸ್ಯೆ ನಿಮ್ಮನ್ನು ಕಾಡಬಹುದು. ನಿಮ್ಮ ಸಂಗಾತಿ ನಿರ್ಲಕ್ಷ್ಯ ಮಾಡುತ್ತಿದ್ದಾರೇನೋ ಎಂಬ ಭಾವನೆ ಮೂಡಲಿದೆ. ವಾರದ ಮಧ್ಯ ಭಾಗದಲ್ಲಿ ಸಂಗಾತಿ ಮಕ್ಕಳ ಜತೆಗೆ ಉತ್ತಮವಾದ ಸಮಯ ಕಳೆಯುವಂಥ ಅವಕಾಶ ದೊರೆಯಲಿದೆ. ಶುಭದಿನ **21.** ಲಲಿತಾ ಸಹಸ್ರನಾಮ ಪಠಿಸಿರಿ.




ನಿಮ್ಮ ಆರ್ಥಿಕ ಸ್ಥಿತಿ ಉತ್ತಮವಾಗಲಿದೆ. ಶೈಕ್ಷಣಿಕ, ಬೌದ್ಧಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದ್ದೀರಿ. ಸ್ನೇಹಿತರು, ಸಂಬಂಧಿಕರಿಂದ ಮಹತ್ವದ ಮಾಹಿತಿ ದೊರೆಯಲಿದೆ. ರುಚಿಕಟ್ಟಾದ ಆಹಾರ ಸವಿಯುವ ಯೋಗ ಇದೆ. ಮಕ್ಕಳ ವಿಚಾರದಲ್ಲಿ ಶುಭ ಸುದ್ದಿ ಕೇಳುವಂಥ ಯೋಗ ಇದೆ. ಎಲ್ಲವೂ ಸರಿಯಾಗಿದೆ ಅಂದುಕೊಳ್ಳುವ ಹೊತ್ತಿಗೆ ಏರಿಳಿತಗಳನ್ನು ಕಾಣಲಿದ್ದೀರಿ. ಶುಭದಿನ **24.** ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.